ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ **:** 05 ನೇ ಫೆಬ್ರವರಿ, 2021

ಮಕ್ಕಳ ಸಮಗ್ರ ರಕ್ಷಣಾ ಯೋಜನೆಯ ಕುರಿತು

ಶ್ರೀ ಎನ್. ರವಿಕುಮಾರ್(ವಿಧಾನಸಭೆಯಿಂದ  ಚುನಾಯಿತರಾದವರು) -

463 (501) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕಳೆದ 5 ವರ್ಷಗಳಲ್ಲಿ ಮಕ್ಕಳ ಸಮಗ್ರ ರಕ್ಷಣಾ ಯೋಜನೆಯ ಅನ್ವಯ ಯಾವ ಯಾವ ಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ; ಇದಕ್ಕೆ ತಗುಲಿದ ವೆಚ್ಚ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯಾದ್ಯಂತ ಬಾಲನ್ಯಾಯ ಕಾಯ್ದೆ, 2015ರ ಅನ್ವಯ ಇದುವರೆಗೆ ದಾಖಲು ಮಾಡಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಸದರಿ ಪ್ರಕರಣಗಳನ್ನು ಯಾವ ರೀತಿಯಾಗಿ ವಿಲೇವಾರಿ ಮಾಡಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿರುವ ಅನುಪಾಲನಾ ಬಾಲಗೃಹಗಳೆಷ್ಟು; ಅದರಲ್ಲಿ ಎಷ್ಟು ಮಕ್ಕಳ ಜವಾಬ್ದಾರಿಯನ್ನು ವಹಿಸಿಕೊಳ್ಳಲಾಗಿದೆ; ಸದರಿ ಗೃಹಗಳಲ್ಲಿರುವ ಮಕ್ಕಳ ಸಂಖ್ಯೆ ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)